Akashvani: Bangalore
National Bulletin In Kannada
03.09.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
03.09.2026: 13.10hrs
**********

**ಮುಖ್ಯಾಂಶಗಳು :**

1. ಬೆಲ್ಜಿಯಂ ಪ್ರಧಾನಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ಪ್ರಗತಿಯಲ್ಲಿ
2. ಶ್ರೀಹರಿಕೋಟಾದಿಂದ ನಾಳೆ ಇಓಎಸ್-೦೫ ಭೂ ವೀಕ್ಷಣಾ ಉಪಗ್ರಹ ಉಡಾವಣೆ
3. ಅಮೆರಿಕದಲ್ಲಿ ಜನ್ಮಸಿದ್ಧ ಪೌರತ್ವ ಹಕ್ಕು ನಿಯಂತ್ರಿಸುವ ಡೊನಾಲ್ಡ್ ಟ್ರಂಪ್ ಪ್ರಯತ್ನಕ್ಕೆ ಫೆಡರಲ್ ನ್ಯಾಯಾಲಯ ತಡೆ
4. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ; ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ಗೆ ಕಿಡಂಬಿ ಶ್ರೀಕಾಂತ್ ಲಗ್ಗೆ

*********

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ಬೆಲ್ಜಿಯಂ ಪ್ರಧಾನಿ ಬಾರ್ಟ್ ಡಿ ವೆವರ್ ಅವರನ್ನು ಭೇಟಿಯಾಗಿದ್ದು, ದ್ವಿಪಕ್ಷೀಯ ಮಾತುಕತೆ ಪ್ರಗತಿಯಲ್ಲಿದೆ. ಉಭಯ ದೇಶಗಳ ನಡುವೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳ ಬಲವರ್ಧನೆ ಜೊತೆಗೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಚರ್ಚೆ ಕೇಂದ್ರೀಕೃತವಾಗಿದೆ. ಇದಕ್ಕೂ ಮುನ್ನ ಬೆಲ್ಜಿಯಂ ಪ್ರಧಾನಿ ರಾಜಘಾಟ್‌ಗೆ ತೆರಳಿ ಮಹಾತ್ಮಾಗಾಂಧಿ ಅವರ ಸ್ಮಾರಕಕ್ಕೆ ಗೌರವ ನಮನ ಸಲ್ಲಿಸಿದರು. ಬೆಲ್ಜಿಯಂ ಪ್ರಧಾನಿ ಮೂರು ದಿನಗಳ ಭಾರತ ಭೇಟಿಗಾಗಿ ನಿನ್ನೆ ರಾತ್ರಿ ನವದೆಹಲಿಗೆ ಆಗಮಿಸಿದರು. ಅವರೊಂದಿಗೆ ಬೆಲ್ಜಿಯಂ ರಕ್ಷಣಾ ಸಚಿವ ಥಿಯೋ ಫ್ರಾಂಕೆನ್ ಕೂಡ ಆಗಮಿಸಿದ್ದಾರೆ. ಕಳೆದ ವರ್ಷ ಫೆಬ್ರವರಿಯಲ್ಲಿ ಅಧಿಕಾರ ವಹಿಸಿಕೊಂಡ ನಂತರ ಇದು ಬಾರ್ಟ್ ಡಿ ವೆವರ್ ಅವರ ಮೊದಲ ಭಾರತ ಭೇಟಿಯಾಗಿದೆ. ಭಾರತ-ಐರೋಪ್ಯ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ಸಂದರ್ಭದಲ್ಲಿ, ಭಾರತೀಯ ಕೈಗಾರಿಕಾ ವ್ಯವಹಾರಗಳ ಒಕ್ಕೂಟದ ಕಾರ್ಯಕ್ರಮದಲ್ಲಿ ಅವರು ಪ್ರಮುಖ ಭಾಷಣ ಮಾಡಲಿದ್ದಾರೆ. ಈ ಭೇಟಿಯು

ಭಾರತ-ಬೆಲ್ಜಿಯಂ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಹಾಗೂ ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ನವೀಕರಿಸಬಹುದಾದ ಇಂಧನ ಸೇರಿದಂತೆ ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮುನ್ನಡೆಸಲು ಅವಕಾಶವನ್ನು ಒದಗಿಸುತ್ತದೆ.

*********

ಭಾರತ ಮತ್ತು ಬೆಲ್ಜಿಯಂ ಪರಸ್ಪರ ಗೌರವ, ಪ್ರಜಾಪ್ರಭುತ್ವ ಮೌಲ್ಯಗಳು ಮತ್ತು ನಿಯಮ ಆಧಾರಿತ ಜಾಗತಿಕ ಕ್ರಮಕ್ಕೆ ತಮ್ಮ ಬದ್ಧತೆಯನ್ನು ಹಾಗೂ ದೀರ್ಘಕಾಲೀನ ಸಂಬಂಧಗಳನ್ನು ಹೊಂದಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಬೆಲ್ಜಿಯಂ ರಕ್ಷಣಾ ಸಚಿವ ಥಿಯೋ ಫ್ರಾಂಕೆನ್ ಅವರೊಂದಿಗೆ ನಿಯೋಗಮಟ್ಟದ ಮಾತುಕತೆ ಉದ್ದೇಶಿಸಿ ಮಾತನಾಡಿದ ಅವರು, ಜಗತ್ತು ಭೌಗೋಳಿಕ ಮತ್ತು ಆರ್ಥಿಕ ಪ್ರಕ್ಷುಬ್ಧತೆಯನ್ನು ಎದುರಿಸುತ್ತಿದ್ದು, ಈ ಸಮಯದಲ್ಲಿ ಸವಾಲುಗಳನ್ನು ನಿಭಾಯಿಸುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಇಂತಹ ಸಂದರ್ಭದಲ್ಲಿ ಬೆಲ್ಜಿಯಂನಂತಹ ಪ್ರಮುಖ ಪಾಲುದಾರ ರಾಷ್ಟ್ರದ ನಾಯಕರನ್ನು ಭೇಟಿಯಾಗುವುದು ಹಾಗೂ ಪರಸ್ಪರ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಈ ಸಭೆಯು ಉಪಯುಕ್ತ ಅವಕಾಶ ಒದಗಿಸುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

*********

ಇಒಎಸ್-೦೫ ಭೂ ವೀಕ್ಷಣಾ ಉಪಗ್ರಹವನ್ನು ನಾಳೆ ಉಡಾವಣೆ ಮಾಡಲಾಗುವುದು. ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಜಿಎಸ್‌ಎಲ್‌ವಿ-ಎಫ್-೧೭ ರಾಕೆಟ್ ಮೂಲಕ ಉಪಗ್ರಹ ಬೆಳಗಿನ ಜಾವ ೨:೫೫ ಕ್ಕೆ ಉಡಾವಣೆಗೊಳ್ಳಲಿದೆ ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದ್ದಾರೆ. ಇಒಎಸ್-೦೫ ಅತ್ಯಾಧುನಿಕ ಭೂ ವೀಕ್ಷಣಾ ಬಾಹ್ಯಾಕಾಶ ನೌಕೆಯಾಗಿದ್ದು, ಭೂ ಸಿಂಕ್ರೊನಸ್ ಕಕ್ಷೆಯಲ್ಲಿ ಇರಿಸಲಾದ ಭಾರತದ ಮೊದಲ ಇಮೇಜಿಂಗ್ ಉಪಗ್ರಹವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಈ ಕಾರ್ಯಾಚರಣೆಯು ಭಾರತದ ಭೂ ವೀಕ್ಷಣಾ ಸಾಮರ್ಥ್ಯಗಳನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ಭೂ ವೀಕ್ಷಣಾ ಸೇವೆಗಳ ವಿತರಣೆಯನ್ನು ಸುಧಾರಿಸುತ್ತದೆ ಎಂದು ವಿ.ನಾರಾಯಣನ್ ಹೇಳಿದ್ದಾರೆ.

*********

ನ್ಯೂಯಾರ್ಕ್‌ನಲ್ಲಿ ಬ್ಯಾಂಕ್‌ಆಫ್ ಅಮೆರಿಕ ಸಹಯೋಗದೊಂದಿಗೆ ಭಾರತೀಯ ಕಾನ್ಸುಲೇಟ್ ಜನರಲ್ ಆಯೋಜಿಸಿದ್ದ ಉನ್ನತಮಟ್ಟದ ದುಂಡು ಮೇಜಿನ ಸಭೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾಗವಹಿಸಿದ್ದರು. ಈ ವೇಳೆ ಹೂಡಿಕೆದಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ೨೦೨೫-೨೬ರ ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇಕಡ ೭.೮ರಷ್ಟು ಬೆಳವಣಿಗೆ ಸಾಧಿಸಿದೆ. ಜಾಗತಿಕ ಅಡೆತಡೆಗಳು ಮತ್ತು ಸವಾಲುಗಳ ಹೊರತಾಗಿಯೂ ಭಾರತ ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರೆದಿದೆ ಎಂದು ಹೇಳಿದರು. ಭಾರತ ಸರ್ಕಾರ ಮೂಲಸೌಕರ್ಯ ಅಭಿವೃದ್ಧಿಯ ಮೂಲಕ, ವಿಶೇಷವಾಗಿ ವಾಯುಯಾನದಲ್ಲಿ ಉದ್ಯಮವನ್ನು ಬೆಂಬಲಿಸುವತ್ತ ಗಮನಹರಿಸಿದೆ. ಜೊತೆಗೆ ಹೂಡಿಕೆ ವಾತಾವರಣವನ್ನು ಬೆಳೆಸುವತ್ತ ಕೇಂದ್ರೀಕರಿಸಿದೆ ಎಂದು ಅವರು ತಿಳಿಸಿದರು. ಕೃತಕಬುದ್ಧಮತ್ತೆ ಮತ್ತು ದತ್ತಾಂಶ ಕೇಂದ್ರಗಳನ್ನು ಉತ್ತೇಜಿಸುವುದು, ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಬೆಂಬಲಿಸುವುದು, ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಸಾಲ ಲಭ್ಯತೆಯನ್ನು ಖಚಿತಪಡಿಸುವುದು ಹಾಗೂ ಬ್ಯಾಂಕ್‌ಗಳ ಎನ್‌ಒಪಿ ಗಳನ್ನು ಕಡಿಮೆ ಮಾಡುವತ್ತ ಗಮನ ಕೇಂದ್ರೀಕರಿಸಲಾಗಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ನಿರಂತರ ಸವಾಲುಗಳ ಹೊರತಾಗಿಯೂ ಹಣಕಾಸು ಶಿಸ್ತಿಗೆ ಭಾರತದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

*********

ಅಮೆರಿಕದಲ್ಲಿ ಜನ್ಮಸಿದ್ಧ ಪೌರತ್ವವನ್ನು ಮಿತಿಗೊಳಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ಇತ್ತೀಚಿನ ಪ್ರಯತ್ನವನ್ನು ಅಲ್ಲಿನ ಫೆಡರಲ್ ನ್ಯಾಯಾಲಯ ತಡೆಹಿಡಿದಿದೆ. ಟ್ರಂಪ್ ಅವರ ೨೦೨೫ರ ಆರಂಭಿಕ ಆದೇಶವು ೧೪ನೇ ತಿದ್ದುಪಡಿಯನ್ನು ಉಲ್ಲಂಘಿಸುತ್ತದೆ ಎಂದು ಅಲ್ಲಿನ ಸುಪ್ರೀಂ ಕೋರ್ಟ್, ಆದೇಶವನ್ನು ತಿರಸ್ಕರಿಸಿತ್ತು. ೧೪ನೇ ತಿದ್ದುಪಡಿಯು ಪೋಷಕರ ವಲಸೆ ಸ್ಥಿತಿಯನ್ನು ಲೆಕ್ಕಿಸದೆ ಅಮೆರಿಕದ ನೆಲದಲ್ಲಿ ಜನಿಸಿದ ಮಕ್ಕಳಿಗೆ ಪೌರತ್ವವನ್ನು ಖಾತರಿಪಡಿಸುತ್ತದೆ. ಸುಪ್ರೀಂ ಕೋರ್ಟ್‌ನ ಕ್ರಮಕ್ಕೆ ಪ್ರತಿಕ್ರಿಯೆಯಾಗಿ, ಡೊನಾಲ್ಡ್ ಟ್ರಂಪ್ ಆಗಸ್ಟ್ ೬ರಂದು ಪರಿಷ್ಕೃತ ಆದೇಶಕ್ಕೆ ಸಹಿ ಹಾಕಿದ್ದರು. ಇದರಲ್ಲಿ ನಿರ್ದಿಷ್ಟವಾಗಿ ಜನನ ಪ್ರವಾಸೋದ್ಯಮವನ್ನು ಗುರಿಯಾಗಿಸಿಕೊಂಡು ಮತ್ತು ವಿದೇಶಿ ಸರ್ಕಾರಿ ನೌಕರರ ಮಕ್ಕಳು, ವಲಸೆ ವಂಚನೆಯಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಅಥವಾ ಶತ್ರುಗಳೆಂದು ವರ್ಗೀಕರಿಸಲ್ಪಟ್ಟವರಿಗೆ ಪೌರತ್ವವನ್ನು ನಿರಾಕರಿಸಿದರು. ಆದರೆ ಈ ಆದೇಶಕ್ಕೆ ಈಗ ಫೆಡರಲ್ ನ್ಯಾಯಾಲಯ ತಡೆಹಿಡಿದಿದೆ.

*********

ಶಾಲಾ ಶಿಕ್ಷಣ ಸುಧಾರಣೆಗಳ ಮುಂದಿನ ಹಂತದ ಕುರಿತು ಚರ್ಚಿಸಲು ನವದೆಹಲಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕಾರ್ಯದರ್ಶಿಯವರೊಂದಿಗೆ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಸಭೆ ನಡೆಸಿದ್ದಾರೆ. ಕಲಿಕೆಯ ಬುನಾದಿಯನ್ನು ಬಲಪಡಿಸುವುದು, ತರಗತಿಗಳಲ್ಲಿ ನಾವೀನ್ಯತೆಯನ್ನು ಉತ್ತೇಜಿಸುವುದು ಹಾಗೂ ಯುವ ಮತ್ತು ಕ್ರಿಯಾಶೀಲ ಭಾರತದ ಆಶೋತ್ತರಗಳಿಗೆ ತಕ್ಕಂತೆ ಶಿಕ್ಷಣ ವ್ಯವಸ್ಥೆಯು ಮುನ್ನಡೆಯುವುದನ್ನು ಖಚಿತಪಡಿಸಿಕೊಳ್ಳುವ ಕಡೆಗೆ ಚರ್ಚೆಗಳು ಕೇಂದ್ರೀಕೃತವಾಗಿತ್ತು ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಸಚಿವರು ಭವಿಷ್ಯದ ಪರೀಕ್ಷೆಗಳ ಸಿದ್ಧತೆ ಪರಿಶೀಲಿಸಲಿಸಿದರು. ಸಭೆಯಲ್ಲಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಹಿರಿಯ ಅಧಿಕಾರಿಗಳೂ ಉಪಸ್ಥಿತರಿದ್ದರು.

*********

ಕೇರಳಂನಲ್ಲಿ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇಗುಲದ ಚಿನ್ನ ದುರುಪಯೋಗ ಪ್ರಕರಣದ ೧೭ನೇ ಆರೋಪಿಯಾಗಿರುವ ದೇವಸ್ವಂ ಮಂಡಳಿಯ ಮಾಜಿ ಅಧ್ಯಕ್ಷ ಪಿ.ಎಸ್.ಪ್ರಶಾಂತ್ ಅವರಿಗೆ ಕೊಲ್ಲಂ ವಿಜಿಲೆನ್ಸ್ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ. ಅವರ ಆರೋಗ್ಯ ಸ್ಥಿತಿಯನ್ನು ಪರಿಗಣಿಸಿ ನ್ಯಾಯಾಲಯ ಅವರಿಗೆ ಜಾಮೀನು ನೀಡಿದೆ. ಇದೇ ವೇಳೆ ಈ ಪ್ರಕರಣದಲ್ಲಿ ಎಸ್‌ಐಟಿ ತನಿಖೆಯ ಪ್ರಗತಿಯನ್ನು ಹೈಕೋರ್ಟ್ ಪರಿಗಣಿಸಲಿದೆ. ಈ ಪ್ರಕರಣವನ್ನು ಕೇರಳ ಹೈಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ಎಸ್‌ಐಟಿ ವಿಚಾರಣೆ ನಡೆಸುತ್ತಿದೆ.

*********

ರಷ್ಯಾದ ಮೇಲಿನ ಉಕ್ರೇನ್ ದಾಳಿ ಹಾಗೂ ಪಾಶ್ಚಿಮಾತ್ಯ ದೇಶಗಳ ನಿರ್ಬಂಧ ರಷ್ಯಾದ ಆರ್ಥಿಕತೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಅಮೆರಿಕದ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ತಿಳಿಸಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಇರಾನ್‌ಗೆ ರಷ್ಯಾದ ಬೆಂಬಲ ಹಾಗೂ ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧದ ಬಗ್ಗೆ ಪ್ರಸ್ತಾಪಿಸಿದರು. ಅಮೆರಿಕ ತನ್ನದೇ ಆದ ರಕ್ಷಣಾ ಅವಶ್ಯಕತೆಗಳನ್ನು ಹೊಂದಿವೆ. ಇತರ ದೇಶಗಳಿಗೆ ಸಶಾಸ್ತ್ರಗಳನ್ನು ಒದಗಿಸುವ ಮೊದಲು ಅಮೆರಿಕದಲ್ಲಿ

ದಾಸ್ತಾನುಗಳು ಸಾಕಷ್ಟಿವೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕಿದೆ ಎಂದು ಮಾರ್ಕೊ ರುಬಿಯೊ ತಿಳಿಸಿದರು.

*********

ಭಾರತದ ಶೆಟ್ಲರ್ ಕಿಡಂಬಿ ಶ್ರೀಕಾಂತ್, ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಕ್ವಾರ್ಟರ್ ಫೈನಲ್‌ಗೆ ಪ್ರವೇಶಿಸಿದ್ದಾರೆ. ಅವರು, ವಿಶ್ವದ ೯ನೇ ಶ್ರೇಯಾಂಕಿತ ಕೆನಡಾದ ವಿಕ್ಟರ್ ಲೈ ಅವರನ್ನು ೨೧-೧೮, ೨೧-೧೯ ನೇರ ಸೆಟ್‌ಗಳಿಂದ ಸೋಲಿಸಿ ಮುಂದಿನ ಹಂತಕ್ಕೆ ಲಗ್ಗೆ ಇಟ್ಟಿದ್ದಾರೆ. ಇದೇ ವೇಳೆ ಮಹಿಳಾ ಸಿಂಗಲ್ಸ್ ವಿಭಾಗದ ಎರಡನೇ ಸುತ್ತಿನಲ್ಲಿ ಭಾರತದ ತನ್ವಿ ಶರ್ಮ, ಜಪಾನ್‌ನ ಟೊಮೊಕಾ ಮಿಯಾಜಾಕಿ ಅವರ ವಿರುದ್ಧ ೧೭-೨೧, ೨೧-೧೮, ೧೬-೨೧ ಅಂತರದಿಂದ ಪರಾಭವ ಹೊಂದಿದ್ದಾರೆ.

*********

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಟಿ-೨೦ ಮಹಿಳಾ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿಯ ತನ್ನ ಎರಡನೇ ಗುಂಪು 'ಎ' ಪಂದ್ಯದಲ್ಲಿ ಭಾರತ ತಂಡ ಇಂದು ಹಾಂಗ್‌ಕಾಂಗ್ ತಂಡದ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾನುವಾರ ದುಬೈನಲ್ಲಿ ನಡೆದ ಪಂದ್ಯದಲ್ಲಿ ಥೈಲ್ಯಾಂಡ್ ತಂಡದ ವಿರುದ್ಧ ೯೪ ರನ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಭಾರತ ಮಹಿಳಾ ತಂಡ, ತನ್ನ ಅಭಿಯಾನ ಆರಂಭಿಸಿತು.

*********

ಭಾರತ ಇದೇ ೫ ರಿಂದ ೯ ರವರೆಗೆ ಅಹಮದಾಬಾದ್‌ನ ಸಬರಮತಿ ನದಿ ತೀರದಲ್ಲಿ ಇದೇ ಮೊದಲ ಬಾರಿಗೆ ಹುಂಡೈ ವರ್ಲ್ಡ್ ಆರ್ಚರಿ ಪ್ಯಾರಾ ಸರಣಿಯನ್ನು ಆಯೋಜಿಸಲಿದ್ದು, ೨೦ ದೇಶಗಳಿಂದ ೧೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಜೂನ್ ೩೦ ರಿಂದ ಜುಲೈ ೪ ರವರೆಗೆ ಬ್ಯಾಂಕಾಕ್ ಮತ್ತು ಜೆಕಿಯಾದ ನೋವ್ ಮೆಸ್ಟೊದಲ್ಲಿ ನಡೆದ ಸ್ಪರ್ಧೆಗಳ ನಂತರ ಇದು ೨೦೨೬ ರ ಸರಣಿಯ ಮೂರನೇ ಹಂತವಾಗಿದೆ. ನಾಲ್ಕನೇ ಮತ್ತು ಅಂತಿಮ ಹಂತವು ಅಕ್ಟೋಬರ್‌ನಲ್ಲಿ ಚಿಲಿಯ ಸ್ಯಾಂಟಿಯಾಗೊದಲ್ಲಿ ನಡೆಯಲಿದೆ. ಗುಜರಾತ್ ಸರ್ಕಾರ, ಗುಜರಾತ್ ಕ್ರೀಡಾ ಪ್ರಾಧಿಕಾರ ಮತ್ತು ಭಾರತ ಕ್ರೀಡಾ ಪ್ರಾಧಿಕಾರ ಈ ಕ್ರೀಡಾಕೂಟವನ್ನು ಆಯೋಜಿಸಲಿದೆ.